ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಚಾಮರಾಜನಗರ ಉಪ್ಪಾರ ಬೀದಿಯ ಪ್ರಾಥಮಿಕ ಶಾಲಾ ಕಾಂಪೌಂಡ್ ನಿರ್ಮಾಣ

ಶ್ರೀ ಎಸ್.ನಾಗರಾಜ್ (ಸಂದೇಶ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

109 (47) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2017ರಲ್ಲಿ ಚಾಮರಾಜನಗರ ಉಪ್ಪಾರ ಬೀದಿಯ ಪ್ರಾಥಮಿಕ ಶಾಲೆಯ ಕಾಂಪೌಂಡನ್ನು ರಾಷ್ಟ್ರೀಯ ಹೆದ್ದಾರಿ ಆಗಲೀಕರಣದ ಸಂದರ್ಭದಲ್ಲಿ ಒಡೆದುಹಾಕಿದ್ದು, ಇದುವರೆಗೂ ಪುನರ್ ನಿರ್ಮಾಣ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಾಂಪೌಂಡ್ ಇಲ್ಲದಿರುವುದರಿಂದ ದನಕರುಗಳು, ಅನಧಿಕೃತ ವ್ಯಕ್ತಿಗಳು ಪ್ರವೇಶಿಸ ುತ್ತಿರುವುದು, ಶಾಲೆಯ ಆವರಣ ವಿರೂಪವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಕೂಡಲೇ ಕಾಂಪೌಂಡ್ ನಿರ್ಮಾಣ ಮಾಡಿ, ಕೊಳಚೆ ನೀರು ಚರಂಡಿಗೆ ಹರಿದು ಹೋಗುವಂತೆ ಮಾಡಿ, ಶಾಲಾ ಅವರಣವನ್ನು ಸ್ವಚ್ಛಗೊಳಿಸಲು ತೆಗೆದುಕೊಂಡಿರುವ ಕ್ರಮಗಳೇನು?